ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

-10-

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 26/1/21

# ಜನತಾ ಪರಿವಾರ ಒಗ್ಗೂಡಿಸಲು ಘರ್ ವಾಪ್ಸಿ

ಉದಯ 26/1/21

ಹುಬ್ಬಳ್ಳಿ: ಜನತಾ ಪರಿವಾರ ಒಂದುಗೂಡಿಸಲು ಹಾಗೂ ಜೆಡಿಎಸ್ ಪಕ್ಷವನ್ನು ಇನ್ನಷ್ಟು ಬಲವರ್ಧನೆಗೊಳಿಸಿ ಯುವಕರಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಪಕ್ಷ ಬಿಟ್ಟು ಹೋದವರನ್ನು ವಾಪಸ್ ಕರೆತರಲಾಗುವುದು. ಯುವಕರಿಗೆ ಶೇ.45 ಸ್ಥಾನಗಳನ್ನು ನೀಡಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ತಿಳಿಸಿದರು.



ಪಕ್ಷದ ಬೆಳಗಾವಿ ವಿಭಾಗಮಟ್ಟದ ಕೋರ್ ಕಮಿಟಿ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪಕ್ಷದ ಸಂಘಟನೆಯನ್ನು ಪ್ರಾಮಾಣಿಕವಾಗಿ ಬೆಳೆಸುವವರಿಗೆ ಹಾಗೂ ಯುವಕರಿಗೆ, ಶೇ.20 ಮಹಿಳೆಯರಿಗೆ ಆದ್ಯತೆ ನೀಡಲಾಗುವುದು. ಜನತಾ ಪರಿವಾರದವರನ್ನು ಹಾಗೂ ಪಕ್ಷ ತೊರೆದು ಹೋದವರನ್ನು ಮರಳಿ ತರಲು ಪ್ರಯತ್ನಿಸಲಾಗುವುದು ಎಂದರು.

> **ಸಿಎಂ ಯಡಿಯೂರಪ್ಪ ಈ ಹಿಂದೆ ಮನೆಗೆ ಬಂದು ಸಚಿವ ಸ್ಥಾನ ಕೊಡುತ್ತೇನೆ ಬಿಜೆಪಿಗೆ ಬರುವಂತೆ ಆಹ್ವಾನಿಸಿದ್ದರೂ ಜೆಡಿಎಸ್ ಬಿಟ್ಟು ಹೋಗಲಿಲ್ಲ. ಸಿದ್ದರಾಮಯ್ಯ ಒತ್ತಾಯಿಸಿದರೂ ಕಾಂಗ್ರೆಸ್‌ಗೆ ಹೋಗಿಲ್ಲ. ಈಗಲೂ ಯಾವುದೇ ಕಾರಣಕ್ಕೂ ಪಕ್ಷ ಬಿಡುವ ಮಾತೇ ಇಲ್ಲ.**
>
> **• ಬಸವರಾಜ ಹೊರಟ್ಟಿ**

ಪಕ್ಷ ಸಂಘಟನೆ ನಿಟ್ಟಿನಲ್ಲಿ ಜ.31ರಂದು ಮಾಜಿ ಸಿಎಂ ಕುಮಾರಸ್ವಾಮಿ ಬಾಗಲಕೋಟೆ, ವಿಜಯಪುರ ಜಿಲ್ಲೆಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಿಗೆ ಪ್ರವಾಸ ಮಾಡಲಿದ್ದಾರೆ. ಫೆ.15ರ ನಂತರ ಏಳು ಜಿಲ್ಲೆಗಳಲ್ಲಿ ಪಕ್ಷ ಸಂಘಟಿಸಿ, ಪಕ್ಷದ ಪದಾಧಿಕಾರಿಗಳನ್ನು ನೇಮಿಸಲಾಗುವುದು ಎಂದರು.